<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ</u>
<u>ಶ್ರೀರಂಗಪಟ್ಟಣ</u>

<u>ಸಿ.ಸಿ.228/2018</u>

| | |
|---|---|
| ಸಿ.ಡಬ್ಲ್ಯೂ ಃ | 5 |
| ಪಿ.ಡಬ್ಲ್ಯೂ ಃ | 6 |

| | | |
|---|---|---|
| ಸಾಕ್ಷಿದಾರರ ಹೆಸರು | ಃ | ಬಸವರಾಜು |
| ತಂದೆ/ ಪತಿಯ ಹೆಸರು | ಃ | ಪುಟ್ಟರಾಜು |
| ವಯಸ್ಸು | ಃ | 40 ವರ್ಷ |
| ವೃತ್ತಿ | ಃ | ವ್ಯವಸಾಯ |
| ವಾಸ | ಃ | ಹೊಸಆನಂದೂರು |

**<u>ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕಃ 24.06.2025</u>**

**<u>ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದ</u>**

ನಾನು ಆರೋಪಿಯನ್ನು ನೋಡಿರುವುದಿಲ್ಲ. ನನಗೆ ಚಾಸಾ-4 ರವರ ಪರಿಚಯ ಇರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲೀಸರು ಮಹಜರ್ ಗೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ಪೋಲೀಸರು ಸಹಿ ಮಾಡು ಎಂದು ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿಗೆ ಈಗ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿ ಇರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

<u>ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ</u>

ದಿಃ 20.10.2017 ರಂದು ಪೋಲೀಸರು ನನ್ನನ್ನು ಹಾಗೂ ಚಾಸಾ-4 ರವರನ್ನು ಅಪಘಾತದ ಸಂಬಂಧ ಪಂಚನಾಮೆ ಮಾಡುವ ಸಲುವಾಗಿ ಕರೆದಿರುತ್ತಾರೆ ಎಂದರೆ ಸರಿಯಲ್ಲ. ಅದಕ್ಕೆ ನಾನು ಮತ್ತು ಚಾಸಾ-4 ರವರು ಒಪ್ಪಿಕೊಂಡೆವು ಎಂದರೆ ಸರಿಯಲ್ಲ. ನಂತರ ನಾನು

ಮತ್ತು ಚಾಸಾ-4 ರವರು ಘಟನಾ ಸ್ಥಳಕ್ಕೆ ಹೋಗಿದ್ದು, ಅಲ್ಲಿ ಪೋಲೀಸರು ನಮ್ಮ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾವು ಸದರಿ ಪಂಚನಾಮೆಗೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

## ಪಾಟೀಸವಾಲು ಃ ಆರೋಪಿ ಪರ ವಕೀಲರಿಂದ

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.